## ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು

**E-mail:commissioner.pue@gmail.com. * Ph. No.23361857, 23361858* Fax-23361852**


ಸಂಖ್ಯೆ:ಪಪೂಶಿ/ಶೈಶಾ/ಪ.ಪು.ಅ/01/2016-17 ದಿನಾಂಕ: 21-06-2017.

## ಸುತ್ತೋಲೆ

ವಿಷಯ:- ಅರ್ಥಶಾಸ್ತ್ರ ವಿಷಯದ ಪರಿಷ್ಕೃತ ಪಠ್ಯಪುಸ್ತಕದ ಕುರಿತು.

ಉಲ್ಲೇಖ:-1. ಸರ್ಕಾರದ ಆದೇಶ ಸಂಖ್ಯೆ ಇಡಿ 50 ಟಿಪಿಯು 2017, ದಿನಾಂಕ:13-04-2017.

2. ಈ ಕಛೇರಿ ಸುತ್ತೋಲೆ ಸಂಖ್ಯೆ ಪಪೂಶಿ/ಶೈಶಾ/ಪ.ಪೂ.ಮು.ಟೆಂ/2016-17, ದಿನಾಂಕ:20-04-2017.

-*-

ಉಲ್ಲೇಖಿತ ಸರ್ಕಾರದ ಆದೇಶದಂತೆ 2017-18ನೇ ಸಾಲಿನಲ್ಲಿ ಪ್ರಥಮ ಪಿಯುಸಿಗೆ ಅರ್ಥಶಾಸ್ತ್ರ, ಲೆಕ್ಕಶಾಸ್ತ್ರ ಮತ್ತು ವ್ಯವಹಾರ ಅಧ್ಯಯನ ವಿಷಯಗಳಿಗೆ ಸಂಬಂಧಿಸಿದಂತೆ ಎನ್.ಸಿ.ಇ.ಆರ್.ಟಿ. ಪಠ್ಯಪುಸ್ತಕಗಳನ್ನು ಅಳವಡಿಸಲಾಗಿದೆ. ಈ ಸಂಬಂಧ ಉಲ್ಲೇಖ-2ರಂತೆ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. ಆದಾಗ್ಯೂ, ಈ ಕುರಿತಂತೆ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಗೆ ಮತ್ತೊಮ್ಮೆ ಈ ಕುರಿತ ಮಾಹಿತಿಯನ್ನು ಒದಗಿಸಲು ತಿಳಿಸಿದೆ.

ಅರ್ಥಶಾಸ್ತ್ರ ವಿಷಯವು ಕಲಾ ವಿಭಾಗ ಹಾಗೂ ವಾಣಿಜ್ಯ ವಿಭಾಗದ ವಿವಿಧ ಸಂಯೋಜನೆಗಳಲ್ಲಿ ಅಧ್ಯಯನ ಮಾಡಲ್ಪಡುತ್ತಿದ್ದು, ಪ್ರಥಮ ಪಿಯುಸಿಯ ಈ ಎಲ್ಲಾ ಸಂಯೋಜನೆಗಳ ಅರ್ಥಶಾಸ್ತ್ರ ವಿಷಯಕ್ಕೆ ಎನ್.ಸಿ.ಇ.ಆರ್.ಟಿ. ಪಠ್ಯಪುಸ್ತಕ ಅಳವಡಿಸಿಕೊಂಡಿರುವ ಕುರಿತಂತೆ ಸಂಬಂಧಿಸಿದ ಎಲ್ಲರಿಗೆ ಮಾಹಿತಿಯನ್ನು ನೀಡಲು ತಿಳಿಸಿದೆ.

21/6/17

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ರವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಜಿಲ್ಲಾ ಉಪನಿರ್ದೇಶಕರ ಮೂಲಕ.
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ.